ಕರ್ನಾಟಕ ಸರ್ಕಾರ (ಸಿ.ಆರ್.ಪಿ. 67)

| |
|---|
| ಹೇಳಿಕೆ ಹಾಳೆ<br>(ಆರ್.ಪಿ. ಸಂಖ್ಯೆ 57)<br>ನಮೂನೆ ಸಂಖ್ಯೆ 4<br>(ಸಿವಿಲ್) |

ದಿವಾಣಿ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ.ದಂ. ಹಳಿಯಾಳ
ಇವರ ನ್ಯಾಯಾಲಯದಲ್ಲಿ.

ಸಿ.ಸಿ. ನಂ.: 268/2016

....................................................................

CW 16
PW 15

| | | |
|---|---|---|
| ಹೆಸರು | : | ಪ್ರಶಾಂತ ಸಿದ್ದನಗೌಡರ |
| ತಂದೆಯ ಹೆಸರು | : | ಫಕೀರಗೌಡ |
| ವಯಸ್ಸು | : | 58 ವರ್ಷ |
| ಉದ್ಯೋಗ | : | ಎ ಸಿ ಪಿ, ಧಾರವಾಡ ನಗರ. |
| ವಾಸಸ್ಥಳ | : | ಧಾರವಾಡ. |

ದಿನಾಂಕ 17-09-2025 ರಂದು ಸತ್ಯಪ್ರತಿಜ್ಞೆ ಮೇಲೆ ಪ್ರಮಾಣವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ** : ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ :

ನಾನು 2013 ರಿಂದ 2016 ರ ವರೆಗೆ ದಾಂಡೇಲಿ ವೃತ್ತ ನೀರಿಕ್ಷಕನಾಗಿ ಆಗಿ ಕರ್ತವ್ಯ ನಿರ್ವಹಿಸಿದ್ದೇನೆ.

ದಿನಾಂಕ 02-10-2013 ರಂದು ಈ ಪ್ರಕರಣದ ಕಡತವನ್ನು ಚಾಸಾ 15 ರವರಿಂದ ಪಡೆದು ಸ್ವೀಕರಿಸಿ ಪರಿಶೀಲನೆ ಮಾಡಿ, ಅದೇ ದಿನ ಚಾಸಾ 1 ರವರ ಮರುಹೇಳಿಕೆ ಪಡೆದು, ದಿನಾಂಕ 14-09-2016 ರಂದು ಈ ಪ್ರಕರಣದ ಆರೋಪಿತನ ವಿರುದ್ದ ಸಾಕಷ್ಟು ಸಾಕ್ಷ್ಯಾಧಾರಗಳು ಲಭಿಸಿದ್ದರಿಂದ ದೋಷಾರೋಪಣಾ ಪತ್ರವನ್ನು ಸಲ್ಲಿಸಿರುತ್ತೇನೆ.

**ಪಾಟೀ ಸವಾಲು :** ಆರೋಪಿ ಪರ ಶ್ರೀ ಎ ಎಫ್ ಕೆ ವಕೀಲರಿಂದ .

ಆರೋಪಿತನ ವಿರುದ್ದ ದೋಷಾರೋಪಣಾ ಪತ್ರ ಸಲ್ಲಿಸುವ ಮೊದಲು ಚಾಸಾ 1 ರವರ ಮರುಹೇಳಿಕೆಯನು ಪರಿಶೀಲಿಸಿರುತ್ತೇನೆ. ಚಾಸಾ 1 ರವರ ಮರುಹೇಳಿಕೆಯಲ್ಲಿ ಚಲನ್ ಗಳ ಪ್ರತಿಯನ್ನು ಪರಿಶೀಲಿಸಿರುತ್ತೇನೆ. ಚಾಸಾ 1 ರವರು ಆರೋಪಿತನು ಚಲನ್ ಗಳ ಪ್ರತಿಗಳನ್ನು ನಾಶಪಡಿಸಿದ್ದಾನೆ ಎಂದು ಹೇಳಿಕೆ ನೀಡಿದ್ದು, ಆ ಚಲನ್ ಪ್ರತಿಗಳನ್ನು ಆರೋಪಿ ನಾಶಮಾಡಿಲ್ಲ ಎಂದರೆ ಸರಿಯಲ್ಲ. ಆರೋಪಿಯ ಕೈ ಬರಹದ ಹಾಳೆಗಳನ್ನು ಎಫ್ ಎಸ್ ಎಲ್ ಗೆ ಕಳುಹಿಸುವ ಮುಂಚೆ ಪರಿಶೀಲಿಸಿದ್ದೀರಾ ಎಂದರೆ ಸಾಕ್ಷಿ ಆ ರೀತಿ ಪರಿಶೀಲನೆ ಮಾಡಲು ಬರುವುದಿಲ್ಲ ಎನ್ನುತ್ತಾರೆ.ಚಾಸಾ 1

ರವರು ನಿಮ್ಮ ಸಮಕ್ಷಮ ಯಾವುದೇ ಮರುಹೇಳಿಕೆ ನೀಡಿಲ್ಲ ಎಂದರೆ ಸರಿಯಲ್ಲ. ಚಾಸಾ 1 ಮತ್ತು 15 ರವರು ನಿಮ್ಮ ಸಮನಾಧಿಕಾರಿಗಳು ಎಂದರೆ ಸರಿ. ಆರೋಪಿ ನಿಮ್ಮ ಇಲಾಖೆಯ ಸಿಬ್ಬಂದಿ ಎಂದರೆ ಸರಿ. ಆರೋಪಿ ಯಾವುದೇ ತಪ್ಪು ಮಾಡಿಲ್ಲ, ನಿಮ್ಮ ಮೇಲಾಧಿಕಾರಿಗಳ ಮಾತು ಕೇಳಿ ಆರೋಪಿತನ ವಿರುದ್ಧ ಸಾಕಷ್ಟು ಸಾಕ್ಷ್ಯಾಧಾರಗಳು ಇವೆ ಎಂದು ಸುಳ್ಳು ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತೀರಿ ಎಂದರೆ ಸರಿಯಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ )

ಓ.ಹೇ.ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂ., ಹಳಿಯಾಳ.